ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ರಾಜ್ಯದ ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಪ್ಲೇಟ್‌ಲೆಟ್ಸ್ ನೀಡುವ ವ್ಯವಸ್ಥೆ ಬಗ್ಗೆ

ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು ) :-

96 (136) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ 5 ವರ್ಷದಿಂದ ಇಲ್ಲಿಯವರೆವಿಗೆ ಡೆಂಗ್ಯೂ ಹೆಚ್1ಎನ್1 ನಿಂದ ಸಾವನ್ನಪ್ಪಿರುವವರ ಸಂಖ್ಯೆ ಎಷ್ಟು ; ಈ ರೋಗಗಳು ಯಾವುದರ ಮೂಲಕ ಹರಡುತ್ತದೆ ; (ಜಿಲ್ಲಾವಾರು ವಿವರ ನೀಡುವು )

(ಆ) ಈ ರೋಗಗಳ ನಿಯಂತ್ರಣಕ್ಕೆ ಸರ್ಕಾರದ ಕ್ರಮಗಳೇನು ;

(ಇ) ಎಲ್ಲಾ ಜಿಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಪ್ಲೇಟ್‌ಲೆಟ್ಸ್ (ರಕ್ತ) ಕೊಡುವ ವ್ಯವಸ್ಥೆ ಮಾಡಲಾಗಿದೆಯೇ ; ಈ ರೋಗಗಳಿಂದ ಸಾವನ್ನಪ್ಪಿದ ಬಡ ಜನರಿಗೆ ಸರ್ಕಾರದಿಂದ ಆರ್ಥಿಕ ನೆರವು ನೀಡುವ ಚಿಂತನೆ ಇದೆಯೆ; ನಿಯಂತ್ರಣಕ್ಕೆ ಖರ್ಚು ಮಾಡಿರುವ ಹಣವೆಷ್ಟು ;

(ಈ) ಇತ್ತೀಚೆಗೆ ರಕ್ತ ದಾನ ಮಾಡುವವರ ಸಂಖ್ಯೆ ಕಡಿಮೆ ಆಗಿರುವುದು ಸರ್ಕಾರದ ಗಮನದಲ್ಲಿದೆಯೇ ; ಹಾಗಿದ್ದಲ್ಲಿ, ಸಾರ್ವಜನಿಕರಿಗೆ ಪ್ರೇರಪಣೆ ನೀಡಿ ಈ ರಕ್ತದಾನ ಶಿಬಿರಗಳನ್ನು ಏರ್ಪಡಿಸುವ ಬಗ್ಗೆ ಸರ್ಕಾರವು ಯಾವ ರೀತಿ ಕ್ರಮ ಕೈಗೊಂಡಿದೆ ?